**ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ ಬೆಂಗಳೂರು-1**

ಸಂ.ಸಿ5[1] ಅಧೀ ಬಡ್ತಿ 1/2014-15 ದಿನಾಂಕ: 03-09-2014

## ಜ್ಞಾ ಪ ನ

ವಿಷಯ: ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಆಯುಕ್ತರ ವ್ಯಾಪ್ತಿಯಲ್ಲಿ ವ್ಯಾಪ್ತಿಯಲ್ಲಿ ಸೇವೆ ಸಲ್ಲಿಸುತ್ತಿರುವ ಪ್ರ.ದ.ಸಹಾಯಕರುಳಿಗೆ/ಶೀಘ್ರಲಿಪಿಗಾರರಿಗೆ ಅಧೀಕ್ಷಕರ ಹುದ್ದೆಗೆ ಸ್ಥಾನಾಪನ್ನ ಬಡ್ತಿ ನೀಡುವ ಬಗ್ಗೆ.

ಉಲ್ಲೇಖ: ದಿನಾಂಕ:25-8-2014ರಂದು ನಡೆದ ಇಲಾಖಾ ಮುಂಬಡ್ತಿ ಸಭೆಯ ನಡವಳಿ.

ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಆಯುಕ್ತರ ನೇಮಕಾತಿ ಪ್ರಾಧಿಕಾರದ ವ್ಯಾಪ್ತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅರ್ಹ ಪ್ರಥಮ ದರ್ಜೆ ಸಹಾಯಕರು ಮತ್ತು ಶೀಘ್ರಲಿಪಿಗಾರರಿಗೆ ಅಧೀಕ್ಷಕರ ಹುದ್ದೆಯ ವೇತನ ಶ್ರೇಣಿ ರೂ.20,000-36,300 ರಲ್ಲಿ ಸ್ಥಾನಾಪನ್ನ ಬಡ್ತಿ ನೀಡಲು ಉಲ್ಲೇಖ[1]ರ ಇಲಾಖಾ ಮುಂಬಡ್ತಿ ಸಭೆಯಲ್ಲಿ ನಿರ್ಣಯಿಸಲಾಗಿದೆ.

ಈ ಹಿನ್ನೆಲೆಯಲ್ಲಿ ಸದರಿ ನೌಕರರುಗಳು ಮುಂಬಡ್ತಿ ಸಂಬಂಧ ಅಧೀಕ್ಷಕರ ಹುದ್ದೆಗಳಲ್ಲಿ ಸ್ಥಳ ಆಯ್ಕೆ ಮಾಡಿಕೊಳ್ಳುವ ಸಲುವಾಗಿ ದಿನಾಂಕ: 09-09-2014ರಂದು ಬೆಳಿಗ್ಗೆ 11.00ಕ್ಕೆ ಆಯುಕ್ತರ ಕಛೇರಿಯ ಸಭಾಂಗಣದಲ್ಲಿ ಸ್ಥಳ ಆಯ್ಕೆ ಪ್ರಕ್ರಿಯೆ ನಡೆಸಲಾಗುವುದು.

ಸದರಿ ಸ್ಥಳ ಆಯ್ಕೆ ಪ್ರಕ್ರಿಯೆಗೆ ಅಭ್ಯರ್ಥಿಗಳ ಅರ್ಹತಾ ಪಟ್ಟಿಯನ್ನು ದಿನಾಂಕ:06-09-2014ರಂದು ಇಲಾಖೆಯ ವೆಬ್ ಸೈಟ್: www.schooleducation.kar.nic.in ನಲ್ಲಿ ಪ್ರಕಟಿಸಲಾಗುವುದು. ಸಂಬಂಧಿಸಿದ ಎಲ್ಲಾ ಅಭ್ಯರ್ಥಿಗಳು ವೆಬ್‌ಸೈಟ್ ಪರಿಶೀಲಿಸಿಕೊಂಡು ದಿನಾಂಕ:9-9-2014ರಂದು ನಡೆಯುವ ಸ್ಥಳ ಪ್ರಕ್ರಿಯೆಗೆ ತಪ್ಪದೇ ಹಾಜರಾಗಲು ಸೂಚಿಸಿದೆ. ಹಾಜರಾಗದಿದ್ದ ಅಭ್ಯರ್ಥಿಗಳಿಗೆ ಡಮ್ಮಿ ಕೌನ್ಸಿಲಿಂಗ್ ಮೂಲಕ ಸ್ಥಳ ಆಯ್ಕೆ ಮಾಡಿ ಸ್ಥಳ ನಿಯುಕ್ತಿಗೊಳಿಸಲಾಗುವುದು.

[ಕೆ.ಆನಂದ]
ಅಪರ ಆಯುಕ್ತರು [ಆಡಳಿತ] [ಹೆ.ಪ್ರ]

ಪ್ರತಿಗಳು:

1. ನಿರ್ದೇಶಕರು, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು
2. ನಿರ್ದೇಶಕರು,ಪ್ರೌಢ ಶಿಕ್ಷಣ, ಸಾ.ಶಿ.ಇಲಾಖೆ, ಆಯುಕ್ತರ ಕಛೇರಿ, ಬೆಂಗಳೂರು
3. ಬೆಂಗಳೂರು ಮತ್ತು ಮೈಸೂರು ಆಯುಕ್ತಾಲಯ ವ್ಯಾಪ್ತಿಯ ಎಲ್ಲಾ ಉಪನಿರ್ದೇಶಕರುಗಳು ಮತ್ತು ಪ್ರಾಂಶುಪಾಲರು ಸಾ.ಶಿ.ಇ. ಇವರುಗಳಿಗೆ
4. ಬೆಂಗಳೂರು ಮತ್ತು ಮೈಸೂರು ಆಯುಕ್ತಾಲಯ ವ್ಯಾಪ್ತಿಯ ಎಲ್ಲಾ ಕ್ಷೇತ್ರ ಶಿಕ್ಷಣಧಿಕಾರಿಗಳು,
5. ಮಾನ್ಯ ಆಯುಕ್ತರ ಆಪ್ತ ಕಾರ್ಯದರ್ಶಿಗಳಿಗೆ ಮಾಹಿತಿಗಾಗಿ.
6. ಸಹನಿರ್ದೇಶಕರು (ಆಡಳಿತ) ರವರ ಆಪ್ತ ಶಾಖೆಗೆ.
7. ಸಂಬಂಧಿಸಿದ ನೌಕರರುಗಳಿಗೆ.
8. ಜ್ಞಾಪನಾ ಕಡತ / ಕಛೇರಿ ಪ್ರತಿ.